# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತಮೂರನೆಯ ಅಧಿವೇಶನ

## <u>ಕಾರ್ಯಕಲಾಪಗಳ ಪಟ್ಟಿ</u>

**ಬುಧವಾರ, ದಿನಾಂಕ:24ನೇ ಜುಲೈ, 2024**

**(ಸಮಯ: ಬೆಳಗ್ಗೆ: 10.00 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಏಳನೆಯ ಪಟ್ಟಿ

ಆ) **<u>ತಡೆಹಿಡಿಯಲಾದ ಪ್ರಶ್ನೆ:</u>**
6ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಗೋವಿಂದರಾಜು** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 86(750) :ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಏಳನೆಯ ಪಟ್ಟಿ

## 02. ಶೂನ್ಯವೇಳೆ ಪ್ರಸ್ತಾವಗಳು

## 03. ಗಮನ ಸೆಳೆಯುವ ಸೂಚನೆಗಳು

01. **ಶ್ರೀಯುತರುಗಳಾದ ಯು.ಬಿ. ವೆಂಕಟೇಶ್, ಐವನ್ ಡಿ'ಸೋಜಾ ಹಾಗೂ ಯತೀಂದ್ರ ಎಸ್,** ಅವರುಗಳು ರಾಜ್ಯ ಸರ್ಕಾರದ ಅಧಿಕಾರಿಗೆ ಕೇಂದ್ರ ಸರ್ಕಾರದ ಅಧಿಕಾರಿಗಳು ನಮ್ಮ ರಾಜ್ಯ ಸರ್ಕಾರ ಹಾಗೂ ಮುಖ್ಯಮಂತ್ರಿಗಳು ಮತ್ತು ಸಚಿವರುಗಳ ವಿರುದ್ಧ ಹೇಳಿಕೆಯನ್ನು ದಾಖಲಿಸುವಂತೆ ಒತ್ತಾಯವನ್ನು ಹೇರಿ, ಜೀವ ಬೆದರಿಕೆಯನ್ನು ಹಾಕಿರುವ ಸಂಬಂಧದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಹೆಚ್ಚುವರಿ ನಿರ್ದೇಶಕರು ದಿನಾಂಕ: 22.07.2024ರಂದು ವಿಲ್ಸನ್ ಗಾರ್ಡನ್ ಪೊಲೀಸ್ ಠಾಣೆಯಲ್ಲಿ ದೂರನ್ನು ದಾಖಲಿಸಿದ್ದು, ಕೇಂದ್ರ ಸರ್ಕಾರದ ಉನ್ನತ ಅಧಿಕಾರಿಗಳು ರಾಜ್ಯ ಸರ್ಕಾರಿ ಅಧಿಕಾರಿಗಳ ಕೆಲಸಕ್ಕೆ ಅಡ್ಡಿಯುಂಟು ಮಾಡುತ್ತಿರುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

02. **ಶ್ರೀ ಡಿ.ಎಸ್. ಅರುಣ್** ಅವರು 2022-23ನೇ ಸಾಲಿನ ಆರ್ಥಿಕ ವರ್ಷದಲ್ಲಿ ಎಲ್ಲಾ ಲೆಕ್ಕಶೀರ್ಷಿಕೆಗಳಿಗೆ ಹಂಚಿಕೆಯಾದ ಹಣದಲ್ಲಿ ಬಳಕೆಯಾಗದೆ ಉಳಿದ ಅನುದಾನವನ್ನು ಸಂಚಿತ ನಿಧಿಗೆ ವರ್ಗಾವಣೆಗೊಳಿಸದೆ ಅಮಾನತ್ತು ಖಾತೆಯಲ್ಲೆ ಉಳಿಸಿರುವ ವಿಚಾರದ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

03. **ಶ್ರೀ ಮಧು ಜಿ. ಮಾದೇಗೌಡ** ಅವರು ಅರಣ್ಯ ಇಲಾಖೆಯಲ್ಲಿ 1994ರ ಪೂರ್ವದಲ್ಲಿ ನೇರ ನೇಮಕಾತಿ ಹುದ್ದೆಗಳ ಎದುರಾಗಿ ದ್ವಿತೀಯ ದರ್ಜೆ ಸಹಾಯಕರಿಂದ ಪ್ರಥಮ ದರ್ಜೆ ಸಹಾಯಕ ವೃಂದಕ್ಕೆ "Promotion on purely temporary basis" ಎಂದು ಮುಂಬಡ್ತಿ ನೀಡಿದ್ದು, ಜೇಷ್ಠತೆಯಲ್ಲಿ ಪರಿಗಣಿಸುವ ಕುರಿತು ಮಾನ್ಯ ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರ ಗಮನ ಸೆಳೆಯುವುದು.

..2..

೦4. **ಶ್ರೀಯುತರುಗಳಾದ ಸಿ.ಟಿ. ರವಿ, ಎನ್. ರವಿಕುಮಾರ್, ಶಶೀಲ್ ಜಿ ನಮೋಶಿ, ಹೇಮಲತಾ ನಾಯಕ್, ಡಿ.ಎಸ್. ಅರುಣ್, ವೈ.ಎಂ.ಸತೀಶ್ ಹಾಗೂ ಕೆ.ಎಸ್.ನವೀನ್** ಅವರುಗಳು ಮೈಸೂರು ರಾಜ್ಯ ವಕ್ಫ್ ಮಂಡಳಿಯು ಮೈಸೂರು ಗೆಜೆಟ್‌ನಲ್ಲಿ ದಿನಾಂಕ:22.10.1964ರಂದು ನಿಗಧಿಪಡಿಸಿರುವ ಮಾನದಂಡಗಳನ್ನು ಅನುಸರಿಸದೆ ಕಾನೂನುಬಾಹಿರವಾಗಿ ಸೇರ್ಪಡೆ ಮಾಡಿರುವ ಆಸ್ತಿಗಳನ್ನು ಗೆಜೆಟ್ ನೋಟಿಫಿಕೇಷನ್‌ನಿಂದ ಕೈಬಿಡಲು ಕ್ರಮಕೈಗೊಳ್ಳುವ ವಿಷಯದ ಕುರಿತು ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಗಮನ ಸೆಳೆಯುವುದು.

೦5. **ಶ್ರೀ ಪ್ರಕಾಶ್ ಬಾಬಣ್ಣ ಹುಕ್ಕೇರಿ** ಅವರು ಚಿಕ್ಕೋಡಿ ಜಿಲ್ಲೆಯ ಸರ್ಕಾರಿ ಪ್ರೌಢ ಶಾಲೆಗಳಿಗೆ ಡೆಸ್ಕ್‌ಗಳನ್ನು ಪೂರೈಕೆ ಮಾಡದೆ ಪ್ರೌಢ ಶಾಲಾ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಅಡಚಣೆ ಉಂಟಾಗುತ್ತಿರುವ ಕುರಿತು ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರ ಗಮನ ಸೆಳೆಯುವುದು.

## 04. ನಿಯಮ 330ರ ಮೇರೆಗೆ

೦1. **ಶ್ರೀ ಯು.ಬಿ. ವೆಂಕಟೇಶ್** ಅವರು ಯುನೋಕಾಯಿನ್ ಟೆಕ್ನಲಾಜೀಸ್ ಕಂಪನಿ ಸರ್ವರ್ ಹ್ಯಾಕ್ ಮಾಡಿ ಕೋಟ್ಯಾಂತರ ರೂಪಾಯಿ ಮೌಲ್ಯದ ಬಿಟ್ ಕಾಯಿನ್ ಕಳ್ಳತನ ಮಾಡಿದ ಸಂಘಟಿತ ಕೃತ್ಯದಲ್ಲಿನ ಆಪಾದಿತರು ಮತ್ತು ಹಗರಣದ ಬಗ್ಗೆ ಪ್ರಗತಿಯಲ್ಲಿರುವ ಸಿ.ಐ.ಡಿ. ವಿಚಾರಣೆ ಮತ್ತು ವರದಿ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀ ಪಿ.ಹೆಚ್. ಪೂಜಾರ್ ಹಾಗೂ ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರುಗಳು ಕೃಷ್ಣ ಮೇಲ್ದಂಡೆ ಯೋಜನೆಯ 3ನೇ ಹಂತದ ಕಾಮಗಾರಿಯನ್ನು ಪೂರ್ಣಗೊಳಿಸುವ ಕುರಿತು ಪ್ರಸ್ತಾಪಿಸುವುದು.

೦3. **ಶ್ರೀಮತಿ ಬಲ್ಕೀಸ್ ಬಾನು** ಅವರು ವೃತ್ತಿ ಶಿಕ್ಷಣದ ಕೋರ್ಸುಗಳಲ್ಲಿ ಸಂಭಾವನೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಬೋಧಕ/ಬೋಧಕೇತರ ಸಿಬ್ಬಂದಿಗಳನ್ನು ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳ ಎದುರು ವಿಶೇಷ ನೇಮಕಾತಿ ನಿಯಮಗಳನ್ವಯ ದಿನಾಂಕ:06.04.2021ರಂದು ವಿಲೀನಗೊಳಿಸಿ ಖಾಯಂಗೊಳಿಸಿದಂತೆ ಇನ್ನುಳಿದ 253 ನೌಕರರುಗಳನ್ನು ಸಹ ಖಾಯಂಗೊಳಿಸುವ ಕುರಿತು ಪ್ರಸ್ತಾಪಿಸುವುದು.

೦4. **ಶ್ರೀಯುತರುಗಳಾದ ಐವನ್ ಡಿ'ಸೋಜಾ, ಪ್ರಕಾಶ್ ಕೆ. ರಾಥೋಡ್, ಯು.ಬಿ. ವೆಂಕಟೇಶ್, ಉಮಾಶ್ರೀ, ಮಂಜುನಾಥ್ ಭಂಡಾರಿ ಹಾಗೂ ಇತರರು** 2021–22ನೇ ಸಾಲಿನಲ್ಲಿ ಭೋವಿ ಅಭಿವೃದ್ಧಿ ನಿಗಮದಲ್ಲಿ ಕೋಟ್ಯಾಂತರ ರೂಪಾಯಿ ಅವ್ಯವಹಾರ ನಡೆದಿರುವ ಕುರಿತು ಪ್ರಸ್ತಾಪಿಸುವುದು.

೦5. **ಶ್ರೀಮತಿ ಹೇಮಲತಾ ನಾಯಕ್** ಅವರು ಕೊಪ್ಪಳ ಜಿಲ್ಲಾ ಆಸ್ಪತ್ರೆಯಲ್ಲಿ ಐ.ಸಿ.ಯು ಬೆಡ್ ಸಿಗದೆ ರೋಗಿಗಳು ತೊಂದರೆ ಅನುಭವಿಸಿ ಸಾವನ್ನಪ್ಪುತ್ತಿರುವ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**